# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 814(900) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ |
| ಉತ್ತರಿಸುವ ದಿನಾಂಕ | : | 14-03-2025 |
| ಉತ್ತರಿಸುವ ಸಚಿವರು | : | ಮಾನ್ಯ ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಎಷ್ಟು ಹಾಸ್ಟೆಲ್‌ಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ;</td><td>ಸಮಾಜ ಕಲ್ಯಾಣ ಇಲಾಖೆ ವತಿಯಿಂದ 1215 ಮೆಟ್ರಿಕ್ ಪೂರ್ವ ಮತ್ತು 713 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಸೇರಿ ಒಟ್ಟಾರೆ 1928 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ.</td></tr>
<tr><td>ಆ</td><td>ಸದರಿ ಹಾಸ್ಟೆಲ್‌ಗಳಿಗೆ ಮಂಜೂರಾಗಿರುವ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ವಿವಿಧ ಹುದ್ದೆಗಳು ಯಾವುವು; (ವಿವರ ನೀಡುವುದು)</td><td>ಸಮಾಜ ಕಲ್ಯಾಣ ಆಯುಕ್ತಾಲಯದ ವ್ಯಾಪ್ತಿಯಲ್ಲಿ ನಿರ್ವಹಣೆ ಮಾಡಲಾಗುತ್ತಿರುವ ಹಾಸ್ಟೆಲ್‌ಗಳಿಗೆ ಮಂಜೂರಾಗಿರುವ, ಭರ್ತಿ ಹಾಗೂ ಖಾಲಿ ಹುದ್ದೆಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ವೃಂದ</th><th>ಮಂಜೂರಾತಿ</th><th>ಭರ್ತಿ</th><th>ಖಾಲಿ</th></tr>
<tr><td>1</td><td>ವಾರ್ಡನ್ (ಪುರುಷ)</td><td>1282</td><td>797</td><td>485</td></tr>
<tr><td>2</td><td>ವಾರ್ಡನ್ (ಮಹಿಳೆ)</td><td>549</td><td>462</td><td>87</td></tr>
<tr><td></td><td>ಒಟ್ಟು</td><td>1831</td><td>1259</td><td>572</td></tr>
</table>
<table>
<tr><th>ಕ್ರ.ಸಂ</th><th>ವೃಂದ</th><th>ಮಂಜೂರಾತಿ</th><th>ಭರ್ತಿ</th><th>ಖಾಲಿ</th></tr>
<tr><td>1</td><td>ಸೀನಿಯರ್ ವಾರ್ಡನ್ (ಪುರುಷ)</td><td>31</td><td>31</td><td>0</td></tr>
<tr><td>2</td><td>ಸೀನಿಯರ್ ವಾರ್ಡನ್ (ಮಹಿಳೆ)</td><td>30</td><td>30</td><td>0</td></tr>
<tr><td></td><td>ಒಟ್ಟು</td><td>61</td><td>61</td><td>0</td></tr>
</table>
</td></tr>
<tr><td>ಇ)</td><td>ಸದರಿ ಹಾಸ್ಟೆಲ್‌ಗಳಲ್ಲಿ ಸಾಕಷ್ಟು ಹುದ್ದೆಗಳು ದೀರ್ಘಕಾಲದಿಂದ ಖಾಲಿ ಇರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ವಿದ್ಯಾಭ್ಯಾಸಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ನಿಲಯಪಾಲಕರ ಹುದ್ದೆ ಖಾಲಿ ಇರುವ ವಸತಿ ನಿಲಯಗಳಿಗೆ ಪಕ್ಕದ ವಸತಿ ನಿಲಯಗಳ ನಿಲಯಪಾಲಕರನ್ನು ಹೆಚ್ಚುವರಿ ಪ್ರಭಾರದಲ್ಲಿರಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ವಿದ್ಯಾಭ್ಯಾಸಕ್ಕೆ ತೊಂದರೆಯಾಗದ ರೀತಿಯಲ್ಲಿ ನಿರ್ವಹಣೆ ಮಾಡಲು ಹಾಗೂ ಜೂನಿಯರ್ ವಾರ್ಡನ್‌ಗಳಿಗೂ ಸಹ ಸ್ವತಂತ್ರ ಪ್ರಭಾರದಲ್ಲಿರಿಸಿ ವಸತಿ ನಿಲಯಗಳ ಸುಸೂತ್ರ ನಿರ್ವಹಣೆಗೆ ಕ್ರಮವಹಿಸಲಾಗಿರುತ್ತದೆ.</td></tr>
</table>

| | | |
|---|---|---|
| ಈ) | ಬಂದಿದ್ದಲ್ಲಿ, ಹಾಸ್ಟೆಲ್‌ಗಳ ಕಾರ್ಯನಿರ್ವಹಣೆ ಸುಗಮವಾಗಿ ಸಾಗಲು ಸಕಾಲದಲ್ಲಿ ಸಿಬ್ಬಂದಿಯನ್ನು ನೇಮಿಸಲು ಸರ್ಕಾರ ಕ್ರಮವಹಿಸದಿರಲು ಕಾರಣಗಳೇನು; | ಪ್ರಸ್ತುತ 572 ವಾರ್ಡನ್ ಹುದ್ದೆಗಳು ಖಾಲಿ ಇದ್ದು, ಭರ್ತಿಗೆ ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.<br><br>ದಿನಾಂಕ:23-08-2023 ರಲ್ಲಿ 232 ವಾರ್ಡನ್ (ಪುರುಷ) ಖಾಲಿ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯ ಸಹಮತಿ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದ್ದು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿ ಇದೆ.<br><br>ಮುಂದುವರೆದು ಮುಂಬಡ್ತಿ ಕೋಟಾದಡಿ 255 ಹುದ್ದೆಗಳು ಲಭ್ಯವಿರುತ್ತವೆ. ಸದರಿ ಹುದ್ದೆಗಳಿಗೆ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅರ್ಹತೆಯನ್ನಾಧರಿಸಿ ಮುಂಬಡ್ತಿ ನೀಡಲು ಕ್ರಮವಹಿಸಲಾಗುವುದು.<br><br>ಪ್ರಸ್ತುತ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರ ದಿನಾಂಕ: 30/09/2024 ರಲ್ಲಿ ಕೆ.ಪಿ.ಎಸ್.ಸಿ ಯಿಂದ 2023ನೇ ಸಾಲಿನಲ್ಲಿ ಸ್ವೀಕೃತಗೊಂಡಿದ್ದ 140 ವಾರ್ಡನ್ ಅಂತಿಮ ಆಯ್ಕೆ ಪಟ್ಟಿಯಲ್ಲಿನ ನೇಮಕಾತಿಗೆ ಹಾಜರಾಗದೇ ಉಳಿದ 34 ಅಭ್ಯರ್ಥಿಗಳ ಹೆಚ್ಚುವರಿ ಪಟ್ಟಿಗೆ ಕೆ.ಪಿ.ಎಸ್.ಸಿ. ಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಸದರಿ ಪಟ್ಟಿ ಸ್ವೀಕೃತಗೊಂಡ ತರುವಾಯ ಶೀಘ್ರವಾಗಿ ನೇಮಕಾತಿಗೆ ಕ್ರಮವಹಿಸಲಾಗುವುದು. |
| ಉ) | ಯಾವ ಕಾಲಮಿತಿಗೊಳಗೆ ಸದರಿ ಎಲ್ಲಾ ಹಾಸ್ಟೆಲ್‌ಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಪೂರ್ಣ ಪ್ರಮಾಣದಲ್ಲಿ ಸಿಬ್ಬಂದಿಗಳನ್ನು ನಿಯುಕ್ತಿಗೊಳಿಸಲಾಗುವುದು? | |

**ಸಕಇ 232 ಪಕವಿ 2025**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**